## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ. | 2551 |
| ಮಾನ್ಯ ಸದಸ್ಯರ ಹೆಸರು | ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.03.2022 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7ಎ ಸನ್ನದುಗಳನ್ನು ಪಡೆಯಲು ಇರುವ ನಿಯಮಗಳು ಯಾವುವು ಮತ್ತು ಇಲಾಖೆಯಿಂದ ವಿಧಿಸಲಾಗುವ ಸಾಮಾನ್ಯ ಷರತ್ತುಗಳು ಯಾವುವು: | ರಾಜ್ಯದಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7ಎ, ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968 ರ ನಿಯಮ-3 ಮತ್ತು 5 ರಡಿ ಮಂಜೂರು ಮಾಡಲಾಗುತ್ತಿದೆ. ಸದರಿ ಸನ್ನದುಗಳಿಗೆ ಸಂಬಂಧಪಟ್ಟಂತೆ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು, 1968 ರ ನಿಯಮ 8, 8(ಎ) ರಲ್ಲಿ ನಿಗಧಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕಗಳನ್ನು ಅರ್ಜಿದಾರರಿಂದ ಪಾವತಿಸಿಕೊಂಡು ಅರ್ಜಿ ಪಡೆಯಲಾಗುತ್ತದೆ.<br><br>ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು ಇರುವಂತಿಲ್ಲ. ಯಾವುದೇ ರಾಜ್ಯ ಸರ್ಕಾರದ/ಕೇಂದ್ರ ಸರ್ಕಾರದ ಕಛೇರಿಯಾಗಲೀ ಅಥವಾ ಸ್ಥಳೀಯ ಸಂಸ್ಥೆಗಳ ಕಛೇರಿಯಾಗಲೀ ಅವುಗಳ ಮುಖ್ಯಸ್ಥರು ಗ್ರೂಪ್ "ಎ" |
| ಆ) | ಸರ್ಕಾರದಿಂದ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7ಎ ಸನ್ನದುಗಳನ್ನು ಪಡೆಯಲು ಕರ್ನಾಟಕದ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳ 1967ರ ನಿಯಮ 5ಕ್ಕೆ ತಿದ್ದುಪಡಿಯನ್ನು ತರಲಾಗಿದೆಯೇ: ಈ ಕುರಿತು ಕರಡು ಪ್ರತಿಯನ್ನು ಹೊರಡಿಸಿ ಆಕ್ಷೇಪಣೆಯನ್ನು ಆಹ್ವಾನಿಸಲಾಗಿದೆಯೇ: ಹಾಗಿದ್ದಲ್ಲಿ, ಕರಡು ಪ್ರತಿಯನ್ನು ಒದಗಿಸುವುದು) | |

| | | |
|---|---|---|
| | | ಅಥವಾ ಗ್ರೂಪ್ "ಬಿ" ಅಧಿಕಾರಿಯಾಗಿದ್ದಲ್ಲಿ, ಆ ಕಛೇರಿಯು ಆಕ್ಷೇಪಣಾ ಸ್ಥಳವೆಂದು ಪರಿಗಣಿಸಲ್ಪಡುತ್ತದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164–12166/2016ರ ದಿನಾಂಕ:31–03–2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ:11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯಿತಿ/ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು |

| | | |
|---|---|---|
| | | ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್-6ಎ ಮತ್ತು ಸಿಎಲ್-7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ 5ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್-7ಎ ಸನ್ನದುಗಳಿಗೂ ವಿಸ್ತರಿಸಿ ಅನುಮತಿಯನ್ನು ನೀಡಲಾಗಿದೆ.<br><br>ಅದರನ್ವಯ, ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳ 1967ರ ನಿಯಮ 5ಕ್ಕೆ ತಿದ್ದುಪಡಿಯನ್ನು ತರಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಈ ನಿಯಮಕ್ಕೆ ತಿದ್ದುಪಡಿಯನ್ನು ತರದೇ ಸಿಎಲ್-6ಎ ಮತ್ತು ಸಿಎಲ್-7ಎ ಸನ್ನದುಗಳನ್ನು ನೀಡಲಾಗಿದೆಯೇ: ಹಾಗಿದ್ದಲ್ಲಿ, ಯಾವ ಆಧಾರದ ಮೇಲೆ ನೀಡಲಾಗಿದೆ: | ಸರ್ಕಾರದ ಪತ್ರ ಸಂಖ್ಯೆ: ಆಇ 36 ಇಡಬ್ಲ್ಯೂಪಿ 2018, ದಿನಾಂಕ:06.08.2020 ಮತ್ತು ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022 ರನ್ವಯ ಸಿಎಲ್-6ಎ ಮತ್ತು ಸಿಎಲ್-7ಎ ಸನ್ನದುಗಳನ್ನು ಮಂಜೂರು ಮಾಡಲಾಗುತ್ತಿದೆ. |
| ಈ) | ಕೋಲಾರ / ಚಿಕ್ಕಬಳ್ಳಾಪುರ/ ದಾವಣಗೆರೆ / ತುಮಕೂರು/ ಚಿತ್ರದುರ್ಗ ಜಿಲ್ಲೆಗಳಲ್ಲಿರುವ ಸಿಎಲ್-6ಎ ಮತ್ತು ಸಿಎಲ್-7ಎ ಸನ್ನದುದಾರರ ಸಂಖ್ಯೆ ಎಷ್ಟು; ಕಳೆದ | ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 01 ಸಿಎಲ್-7ಎ ಸನ್ನದು - ಮ್ಯಾನೇಜರ್, ಕೆ.ಎಸ್.ಟಿ.ಡಿ.ಸಿ, ಮಯೂರ ಪೈನ್ ಟಾಪ್, ನಂದಿ ಹಿಲ್ಸ್, ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇಲ್ಲಿ ಕಾರ್ಯನಿರ್ವಹಿಸುತ್ತಿದೆ. |

| | | |
|---|---|---|
| | 2 ವರ್ಷಗಳಿಂದ ಹೊಸದಾಗಿ ನೀಡಲಾದ ಸಿಎಲ್–6ಎ ಮತ್ತು ಸಿಎಲ್–7ಎ ಸನ್ನದುದಾರರ ಸಂಖ್ಯೆ ಎಷ್ಟು? (ಸನ್ನದುದಾರುವಾರು ತಾಲ್ಲೂಕುವಾರು ವಿವರ ನೀಡುವುದು) | ಉಳಿದಂತೆ, ಕೋಲಾರ / ದಾವಣಗೆರೆ/ ತುಮಕೂರು / ಚಿತ್ರದುರ್ಗ ಜಿಲ್ಲೆಗಳಲ್ಲಿ ಯಾವುದೇ ಸಿಎಲ್–6ಎ ಮತ್ತು ಸಿಎಲ್–7ಎ ಸನ್ನದುಗಳು ಕಾರ್ಯನಿರ್ವಹಿಸುತ್ತಿಲ್ಲ. |

ಆಇ 62 ಇಎಲ್‌ಕ್ಯೂ 2022

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು